ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
GOVERNMENT OF KARNATAKA
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/63 ದಿನಾಂಕ : 12-01-2022

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್ 19 - ಸಂಬಂಧ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಾರ್ಯಾಚರಿಸುತ್ತಿರುವ ರಿಕ್ರಿಯೇಷನ್ ಕ್ಲಬ್ ಗಳನ್ನು ತಾತ್ಕಾಲಿಕವಾಗಿ ಮುಚ್ಚುವ ಬಗ್ಗೆ.

ಉಲ್ಲೇಖ : 1.ಸರಕಾರದ ಆದೇಶ ಸಂಖ್ಯೆ: ಆರ್ ಡಿ 158 ಟಿಎನ್ಆರ್ 2020 ದಿನಾಂಕ: 04-01-2022.
2.ಈ ಕಛೇರಿಯ ನಡವಳಿ ಸಮ ಸಂಖ್ಯೆ:ಎಂಎಜಿ(2)ಸಿಆರ್ 156/2021/133465/ಸಿ4/62 ದಿನಾಂಕ: 05-01-2022.
3.ಜಿಲ್ಲಾ ಸರ್ವೇಕ್ಷಣಾಧಿಕಾರಿ, ಜಿಲ್ಲಾ ಸರ್ವೇಕ್ಷಣಾ ಘಟಕ, ದ.ಕ ಮಂಗಳೂರು ಇವರ ಪತ್ರ ಸಂಖ್ಯೆ: ಡಿಡಿಎಸ್ ಯು 421/2021-2022 ದಿನಾಂಕ: 12-01-2022.

======@======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗರೂಕತೆ ಮಾರ್ಗಸೂಚಿಗಳನ್ನು ಜ್ಯಾರಿಗೊಳಿಸಿದ್ದು, ಸದ್ರಿ ಮಾರ್ಗಸೂಚಿಗಳನ್ನು ಕಾಲಕಾಲಕ್ಕೆ ವಿಸ್ತರಿಸಿ ಮಾರ್ಪಾಡುಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.

ರಾಜ್ಯದಲ್ಲಿ "ಓಮಿಕ್ರಾನ್" ನ ರೂಪಾಂತರದ ಹರಡುವಿಕೆಯಿಂದ, ರಾಜ್ಯ ಸರ್ಕಾರವು ಪೂರ್ವಭಾವಿಯಾಗಿ ಹೆಚ್ಚುವರಿ ಕ್ರಮಗಳನ್ನು ದಿನಾಂಕ : 03-12-2021 ಮತ್ತು 26-12-2021 ರ ಆದೇಶಗಳಂತೆ ಜ್ಯಾರಿಗೊಳಿಸಿರುತ್ತದೆ. ರಾಜ್ಯದಲ್ಲಿ ಕೋವಿಡ್-19 ನ ರೂಪಾಂತರಗೊಂಡ ಓಮಿಕ್ರಾನ್-'ಕಾಳಜಿಯ ರೂಪಾಂತರ' ವೈರಾಣು ಸೋಂಕಿತರ ಸಂಖ್ಯೆಯು ಆತಂಕಕಾರಿಯಾಗಿ ಹೆಚ್ಚಳಗೊಂಡಿರುವುದು ಕಂಡುಬಂದಿದ್ದು 3 ದಿನಗಳಿಗಿಂತ ಕಡಿಮೆ ಅವಧಿಯಲ್ಲಿ ರೋಗಿಗಳ ಸಂಖ್ಯೆಯು ದ್ವಿಗುಣಗೊಂಡಿರುತ್ತದೆ.

ಈ ಹಿನ್ನೆಲೆಯಲ್ಲಿ, ರಾಜ್ಯ ತಾಂತ್ರಿಕ ಸಲಹಾ ಸಮಿತಿಯು ಕೋವಿಡ್-19 ನಿಂದಾಗಿ ಸೋಂಕಿನ ಹರಡುವಿಕೆಯನ್ನು ತಡೆಗಟ್ಟಲು ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ವಿಧಿಸಲು ಸಲಹೆ ನೀಡಿದ್ದು, ಪ್ರಸ್ತುತ ಪರಿಸ್ಥಿತಿಯಲ್ಲಿ ಪರೀಕ್ಷೆ-ಪತ್ತೆ-ಚಿಕಿತ್ಸೆ-ಲಸಿಕಾಕರಣ ಮತ್ತು ಕೋವಿಡ್-19 ಸಮುಚಿತ ವರ್ತನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದು ಮೊದಲಾದ ಐದು ತಂತ್ರಗಳ ಮೇಲೆ ನಿರಂತರವಾಗಿ ಗಮನಹರಿಸುವ ಅಗತ್ಯವಿರುವುದರಿಂದ ಸರ್ಕಾರವು ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗೃತಿಗೆ ಸಂಬಂಧಿಸಿ ಉಲ್ಲೇಖ(1)ರಂತೆ ಹೆಚ್ಚುವರಿ ಮಾರ್ಗಸೂಚಿಗಳನ್ನು ಅನುಸರಿಸಲು ಸರ್ಕಾರದಿಂದ ನಿರ್ದೇಶನ ಬಂದಿರುತ್ತದೆ. ಮುಂದುವರೆದು, ಈ ಆದೇಶವನ್ನು ಯಥಾವತ್ತಾಗಿ ಪಾಲಿಸಲು ಈಗಾಗಲೇ ಉಲ್ಲೇಖ (2) ರಂತೆ ಈ ಕಛೇರಿಯಿಂದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯಾಚರಿಸುತ್ತಿರುವ ರಿಕ್ರಿಯೇಷನ್ ಕ್ಲಬ್ ಗಳಲ್ಲಿ ಇಸ್ಪೀಟ್ ಕಾರ್ಡ್ ಗಳನ್ನು ಆಟವಾಡುತ್ತಿರುವ ವೇಳೆ, ಕಾರ್ಡ್ ಗಳನ್ನು ಒಬ್ಬರು ಮತ್ತೊಬ್ಬರಿಗೆ ನೀಡುತ್ತಿರುವುದರಿಂದ ಕೋವಿಡ್- 19 (ಕೊರೊನಾ ವೈರಾಣು ಕಾಯಿಲೆ-2019) ಯ ಸೋಂಕು ಸಾಂಕ್ರಾಮಿಕವಾಗಿ ಪ್ರಸರಿಸುವ ಸಾಧ್ಯತೆಗಳು ಹೆಚ್ಚಾಗಿರುವುದು ಗಮನಿಸಲಾಗಿದೆ.

ಜಿಲ್ಲಾ ಸರ್ವೇಕ್ಷಣಾಧಿಕಾರಿ, ಜಿಲ್ಲಾ ಸರ್ವೇಕ್ಷಣಾ ಘಟಕ, ದ.ಕ ಮಂಗಳೂರು ಇವರ ಉಲ್ಲೇಖ (3) ರ ವಿವರವಾದ ವರದಿಯನ್ನು ಪಡೆಯಲಾಗಿದ್ದು, ಈ ಕೆಳಗಿನ ಅಂಶಗಳನ್ನು ನಮೂದಿಸಿರುತ್ತಾರೆ.

1. ರಿಕ್ರಿಯೇಷನ್ ಕ್ಲಬ್ ಗಳಲ್ಲಿ ಇಸ್ಪೀಟ್ ಆಡುವಾಗ ಕನಿಷ್ಠ 1 ಮೀ ಸಾಮಾಜಿಕ ಅಂತರ ಸಾಧ್ಯತೆ ಇರುವುದಿಲ್ಲ.
2. ಇಸ್ಪೀಟ್ ಕಾರ್ಡ್ ಗಳಲ್ಲಿ ಆಡುವಾಗ ಒಬ್ಬರಿಂದ ಒಬ್ಬರಿಗೆ ಕಾರ್ಡುಗಳನ್ನು ಹಂಚುವ ಸಂದರ್ಭದಲ್ಲಿ ಸೋಂಕಿತ ವ್ಯಕ್ತಿ ಇದ್ದಲ್ಲಿ ಅವರ ಮೂಲಕ ಸೋಂಕು ಹರಡುವ ಸಾಧ್ಯತೆ ಹೆಚ್ಚಿರುತ್ತದೆ.
3. ಆಟದಲ್ಲಿ ಭಾಗವಹಿಸುವ ವ್ಯಕ್ತಿಗಳಲ್ಲಿ ಆಟದ ಕಡೆ ಮನಸ್ಸನ್ನು ಕೇಂದ್ರೀಕರಿಸುವುದರಿಂದ ಅವರಲ್ಲಿ ಉದ್ವೇಗ, ಕೋಪ, ಆತಂಕಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿರುತ್ತದೆ. ರಿಕ್ರಿಯೇಷನ್ ಕ್ಲಬ್ ಗಳಲ್ಲಿ ಭಾಗವಹಿಸುವ ವ್ಯಕ್ತಿಗಳು ಮಾಸ್ಕ್, ಸ್ಯಾನಿಟೈಸರ್ ಉಪಯೋಗಿಸುವ ಸಾಧ್ಯತೆ ಕಡಿಮೆ ಇರುವುದರಿಂದ ಸೋಂಕು ಹರಡುವ ಸಾಧ್ಯತೆ ಹೆಚ್ಚಿರುತ್ತದೆ.
4. ರಿಕ್ರಿಯೇಷನ್ ಕ್ಲಬ್ ಗೆ ಯಾವುದೇ ರೀತಿಯ ಕೋವಿಡ್ ಸಮುಚಿತ ವರ್ತನೆ (SOP) ಇಲ್ಲದಿರುವುದರಿಂದ ಸದಸ್ಯರನ್ನು ನಿಯಂತ್ರಣಕ್ಕೆ ಒಳಪಡಿಸಲು ಸಾಧ್ಯವಿಲ್ಲದಿರುವುದರಿಂದ ಕೋವಿಡ್ 19 ಸಾಂಕ್ರಾಮಿಕ ರೋಗಗಳು ಸಂಪೂರ್ಣ ನಿಯಂತ್ರಣಕ್ಕೆ ಬರುವ ತನಕ ಈ ರಿಕ್ರಿಯೇಷನ್ ಕ್ಲಬ್ ಗಳಲ್ಲಿ ಇಸ್ಪೀಟ್ ಆಟಗಳ ಜೊತೆಗೆ ಇತರ ಯಾವುದೇ ಕಾರ್ಯ ಚಟುವಟಿಕೆಗಳು ನಡೆಯದಂತೆ ಕ್ರಮ ಕೈಗೊಳ್ಳುವುದು ಅತೀ ಅಗತ್ಯವಿರುತ್ತದೆ
5. ವಿಶ್ವ ಆರೋಗ್ಯ ಸಂಸ್ಥೆಯ ಸಾಪ್ತಾಹಿಕ ಸಾಂಕ್ರಾಮಿಕ ವರದಿ ಪ್ರಕಾರ ಜಿಮ್ ಹಾಗೂ ಫಿಟ್ ನೆಸ್ ಕ್ಲಬ್ ಗಳು ಕೋವಿಡ್ -19 ಸೋಂಕು ಹರಡುವಿಕೆಗೆ ಪ್ರಮುಖ ಕಾರಣವೆಂದು ಕಂಡುಬಂದಿರುತ್ತದೆ. ಆದ ಕಾರಣ ಜಿಮ್ ಹಾಗೂ ಫಿಟ್ ನೆಸ್ ಕ್ಲಾಬ್ ನಲ್ಲಿ ಸ್ಯಾನಿಟೈಸರ್ ಕ್ಲಿಷ್ಟಕರ ಹಾಗೂ ಜನರು ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡದೆ ಕೋವಿಡ್ -19 ಸೋಂಕು ಹರಡುವ ಸಾಧ್ಯತೆ ಹೆಚ್ಚಿರುತ್ತದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್ - 19 ಸೋಂಕು ಪೀಡಿತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಸಾರ್ವಜನಿಕರು ಮುಕ್ತವಾಗಿ ಓಡಾಡುವುದನ್ನು ಹಾಗೂ ಬೆರೆಯುವುದನ್ನು ತಡೆಯುವುದು ಅನಿವಾರ್ಯವಾಗಿರುತ್ತದೆ.

ಉಲ್ಲೇಖ (3) ರ ಜಿಲ್ಲಾ ಸರ್ವೇಕ್ಷಣಾಧಿಕಾರಿ, ಜಿಲ್ಲಾ ಸರ್ವೇಕ್ಷಣಾ ಘಟಕ, ದ.ಕ ಮಂಗಳೂರು ಇವರ ವರದಿಯಂತೆ ರಿಕ್ರಿಯೇಷನ್ ಕ್ಲಬ್ ಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನ ಒಂದೆಡೆ ಸೇರುವುದರಿಂದ ಸೋಂಕು ಹರಡುವ ಸಾಧ್ಯತೆ ಹೆಚ್ಚಿರುತ್ತದೆ ಎಂಬ ಅಂಶವನ್ನು ಗಮನಿಸಲಾಗಿದೆ ಅಲ್ಲದೆ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಪರಿಸ್ಥಿತಿಯು ತಹಬಂದಿಗೆ ಬರುವವರೆಗೆ ರಿಕ್ರಿಯೇಷನ್ ಕ್ಲಬ್ ಗಳ ಚಲಾವಣೆ , ಕ್ಲಬ್ ಗಳಲ್ಲಿನ ಮನೋರಂಜನೆಯು ತೀರಾ ಜೀವನಾವಶ್ಯವಲ್ಲವೆಂಬುದನ್ನು ಕೂಡಾ ಮನಗಾಣಲಾಗಿದೆ.

ಉಲ್ಲೇಖ (1)ರ ಸರ್ಕಾರಿ ಆದೇಶ ಮತ್ತು (3)ರ ಜಿಲ್ಲಾ ಸರ್ವೇಕ್ಷಣಾಧಿಕಾರಿ, ಜಿಲ್ಲಾ ಸರ್ವೇಕ್ಷಣಾ ಘಟಕ, ದ.ಕ ಮಂಗಳೂರು ಇವರ ವರದಿಯನ್ನು ಗಣನೆಗೆ ತೆಗೆದುಕೊಂಡು, ಕೋವಿಡ್ 19 ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 26 (1)(2)(3), 30 (2), 33, 34 (ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷನಾಗಿ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧ್ಯಾದೇಶ 2020 ರ ಕಲಂ 4 (ಎ), (ಹೆಚ್) ಮತ್ತು (ಜೆ), The Epidemic Diseases Act 1897 ರ ಕಲಂ 2 ರಲ್ಲಿ ಪ್ರದತ್ತವಾದ ಅಧಿಕಾರದಂತೆ ಈ ವಿಚಾರದಲ್ಲಿ ತುರ್ತು ಕ್ರಮವಹಿಸುವುದು ಅಗತ್ಯವೆಂದು ಮನಗಂಡು ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ. ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

# ಆದೇಶ

ಮೇಲೆ ವಿವರಿಸಿದ ಸಕಾರಣಗಳನ್ವಯ ಹಾಗೂ ಕೋವಿಡ್ 19 ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಸಾಮಾಜಿಕ ಅಂತರದ ಮಾನದಂಡಗಳನ್ನು ಪಾಲಿಸಲು ಅನುಕೂಲವಾಗುವಂತೆ ಸಾರ್ವಜನಿಕ ಹಿತದೃಷ್ಟಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಾರ್ಯಚರಿಸುತ್ತಿರುವ ಎಲ್ಲಾ ರಿಕ್ರಿಯೇಷನ್ ಕ್ಲಬ್ ಗಳನ್ನು ತಕ್ಷಣದಿಂದ ಅನ್ವಯಿಸುವಂತೆ ಮುಂದಿನ ಆದೇಶದವರೆಗೆ ಮುಚ್ಚಲು ಆದೇಶಿಸಿದೆ.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 12-01-2022 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

12/01/2022

**ಡಾ|| ರಾಜೇಂದ್ರ ಕೆ.ವಿ,** ಭಾ.ಆ.ಸೇ,
**ಜಿಲ್ಲಾಧಿಕಾರಿ**
**ಹಾಗೂ ಅಧ್ಯಕ್ಷರು,**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

12/01/2022

DISTRICT MAGISTRATE GOVT. OF KARNATAKA

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
5. ಉಪ ಆಯುಕ್ತರು, ಅಬಕಾರಿ ಇಲಾಖೆ, ದ.ಕ ಮಂಗಳೂರು.
6. ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
9. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ
10. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು ಹಾಗೂ ವಿಶೇಷ ತಹಶೀಲ್ದಾರರು
11. ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆ ಅಧಿಕಾರಿಗಳು.
12. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.